# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 06

ಮಾನ್ಯ ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 13-09-2021

ಉತ್ತರಿಸುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ANM ಕೇಂದ್ರಗಳಿವೆ; | ಬೆಳಗಾವಿ ಜಿಲ್ಲೆಯಲ್ಲಿ 616 ಉಪ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. |
| ಆ | ಈ ಜಿಲ್ಲೆಯಲ್ಲಿ ಹಲವಾರು ANM ಕೇಂದ್ರಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ ಇವುಗಳ ದುರಸ್ಥಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಬಂದಿದೆ.<br>ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 616 ಉಪ ಕೇಂದ್ರಗಳಿದ್ದು, ಅದರಲ್ಲಿ 222 ಕೇಂದ್ರಳ ಕಟ್ಟಡಗಳು ಸುಸ್ಥಿತಿಯಲ್ಲಿರುತ್ತವೆ. 156 ಕಟ್ಟಡಗಳ ರಿಪೇರಿ ಕಾಮಗಾರಿಯನ್ನು ಜಿಲ್ಲಾ ಪಂಚಾಯತ್ ಕಟ್ಟಡಗಳ ಯೋಜನೆ ಅಡಿಯಲ್ಲಿ / ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಇಂಜಿನಿಯರಿಂಗ್ ವಿಭಾಗ ಅಡಿಯಲ್ಲಿ ಮಾಡಲಾಗುವುದು. ಉಳಿದ 238 ಕೇಂದ್ರಗಳಿಗೆ ಕಟ್ಟಡ ಇರುವುದಿಲ್ಲ. |
| ಇ | ಸದರಿ ANM ಕೇಂದ್ರಗಳಿಗೆ ಮಂಜೂರಾಗಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವರ್ಗವಾರು ಮಾಹಿತಿ ನೀಡುವುದು) | ಸದರಿ ANM ಕೇಂದ್ರಗಳಿಗೆ ಒಬ್ಬರು ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ಹುದ್ದೆ ಮಾತ್ರ ಮಂಜೂರಾಗಿರುತ್ತದೆ. |
| ಈ | ಬೆಳಗಾವಿ ಜಿಲ್ಲೆಯ ANM ಕೇಂದ್ರಗಳಲ್ಲಿ ಎಷ್ಟು ಕೇಂದ್ರಗಳು ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ; ಹಾಗೂ ಎಷ್ಟು ಕೇಂದ್ರಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ; | ಬೆಳಗಾವಿ ಜಿಲ್ಲೆಯಲ್ಲಿ 222 ಉಪ ಕೇಂದ್ರಗಳು ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.<br>ಯಾವುದೇ ಉಪಕೇಂದ್ರಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. |
| ಉ | ಎಲ್ಲಾ ANM ಕೇಂದ್ರಗಳನ್ನು ಸ್ವಂತ ಕಟ್ಟಡದಲ್ಲಿ ನಡೆಸಲು ಸರ್ಕಾರದ ಯೋಜನೆಗಳೇನು? | ಖಾಲಿ ನಿವೇಶನ ಮತ್ತು ಅನುದಾನ ಲಭ್ಯತೆ ಅನುಸಾರ ANM ಕಟ್ಟಡ ನಿರ್ಮಿಸಿ ಸ್ವಂತ ಕಟ್ಟಡದಲ್ಲಿ ANM ಕೇಂದ್ರಗಳನ್ನು ನಡೆಸಲು ಕ್ರಮ ಕೈಗೊಳ್ಳಲಾಗುವುದು. |

**ಆಕುಕ 87 ಎಸ್‌ಬಿವಿ 2021**

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು